155

**ಶ್ರೀ ಸೂರಜ್ ರೇವಣ್ಣ, ಶ್ರೀ ಕೆ.ಎ. ತಿಪ್ಪೇಸ್ವಾಮಿ, ಶ್ರೀ ನಿರಾಣಿ ಹಣಮಂತ ರುದ್ರಪ್ಪ ಹಾಗೂ ಡಾ: ತೇಜಸ್ವಿನಿಗೌಡ ಇವರುಗಳು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ರಾಜ್ಯದಲ್ಲಿ ವಿವಿಧ ಇಲಾಖೆಗಳಾದ ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಮೇಲಿನ ಸಮುದಾಯಗಳ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಿದ್ಯಾಭ್ಯಾಸಕ್ಕೆ 456 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ತೆರೆದು ನಡೆಸಲಾಗುತ್ತಿದೆ. ಈ ಬಗ್ಗೆ ಈ ವಸತಿ ಶಾಲೆಗಳಲ್ಲಿ ಪ್ರವೇಶ ಬಯಸಿ ಗ್ರಾಮಾಂತರ ಪ್ರದೇಶದ ಪ್ರತಿಭಾವಂತ ಅಭ್ಯರ್ಥಿಗಳು ಪ್ರವೇಶ ಕೋರಿ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆ. ಅಂತಹ ವಿದ್ಯಾರ್ಥಿಗಳಿಗೆ ಅವಕಾಶ ಸಿಗದೇ ಅಂತಹ ಗ್ರಾಮಾಂತರ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಅವಕಾಶ ದೊರೆಯದೇ ವಂಚಿತರಾಗಿರುತ್ತಾರೆ. ಆದರೆ ಕೆಲವು ಪ್ರಭಾವಿ ವ್ಯಕ್ತಿಗಳ ಅನ್ಯ ಮಾರ್ಗದ ಮೂಲಕ ಸಿರಿವಂತ ಮಕ್ಕಳಿಗೆ ದೊರಕುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಇದರ ಬಗ್ಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಆದರೆ ಇಲ್ಲಿ ಮೂಲ-ಸೌಕರ್ಯಗಳ ಕೊರತೆ ಜೊತೆಗೆ ಈ ವಸತಿ ನಿಲಯಗಳನ್ನು ನಿರ್ವಹಿಸಲು ಇಲಾಖೆಯಿಂದ ಸೃಜನೆಯಾದ ವಿವಿಧ ವೃಂದದ ಹಲವಾರು ಹುದ್ದೆಗಳು ಖಾಲಿ ಇವೆ. ಈ ಬಗ್ಗೆ ಇಲಾಖಾ ಮುಖ್ಯಸ್ಥರು ಮತ್ತು ಸರ್ಕಾರವು ಈವರೆಗೂ ಯಾವುದೇ ಕ್ರಮ ಜರುಗಿಸಿರುವುದಿಲ್ಲ. ಇದರಿಂದ ಈ ವಸತಿ ನಿಲಯಗಳ ನಿರ್ವಹಣೆ ತುಂಬಾ ಹದಗೆಟ್ಟಿರುತ್ತದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಮಹತ್ವದ ವಿಷಯವನ್ನು ಮಾನ್ಯ ಸಚಿವರ ಗಮನ ಸೆಳೆಯಬಯಸುತ್ತೇವೆ.

**ಉತ್ತರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ತನ್ನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿಯ ಪ್ರವೇಶಾತಿಗಾಗಿ ಪ್ರವೇಶ ಪರೀಕ್ಷೆ ಮತ್ತು ಸೀಟು ಹಂಚಿಕೆ ಕಾರ್ಯವನ್ನು ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (CET Cell) ವಹಿಸಲಾಗಿದೆ.

6ನೇ ತರಗತಿಗೆ ಪ್ರವೇಶಾತಿಗೆ ದಿನಾಂಕ:12.11.2021 ರ ಸರ್ಕಾರದ ಆದೇಶದನ್ವಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ, ಆನ್‌ಲೈನ್ ಸೀಟು ಹಂಚಿಕೆಗೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಲಾಗುತ್ತದೆ.

1. ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳು (ಮೆರಿಟ್)
2. ಅಭ್ಯರ್ಥಿಗೆ ಅನ್ವಯವಾಗುವ ಮೀಸಲಾತಿ
3. ಅಭ್ಯರ್ಥಿಯು ಸೇರಬಯಸುವ ವಸತಿ ಶಾಲೆಗಳ ಶಾಲಾವಾರು ಆದ್ಯತೆ

ಮೇಲ್ಕಂಡ ಅಂಶಗಳ ಆಧಾರದ ಮೇಲೆ seat matrix ಸಿದ್ಧಪಡಿಸಿ ಗಣಕೀಕೃತ ಸ್ವಯಂ ಆಯ್ಕೆ (Computerized auto selection) ಮೂಲಕ ಪಾರದರ್ಶಕವಾಗಿ ಸೀಟು ಹಂಚಿಕೆ ಮಾಡಿ ಪ್ರವೇಶಾವಕಾಶ ನೀಡಲಾಗುತ್ತಿದೆ.

- 2023-24ನೇ ಸಾಲಿಗೆ ಒಟ್ಟು 40920 ಲಭ್ಯ ಸ್ಥಾನಗಳಿಗೆ ಒಟ್ಟು 225922 ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಗೆ ಹಾಜರಾಗಿದ್ದಾರೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021 ರಲ್ಲಿ ಆಯಾ ತಾಲ್ಲೂಕಿನ ಸ್ಥಳೀಯ ಅಭ್ಯರ್ಥಿಗಳಿಗೆ ಶೇ.25 ರಷ್ಟು ಸೀಟುಗಳನ್ನು ಮೀಸಲಿರಿಸಿ ಪ್ರವೇಶವಕಾಶವನ್ನು ಕಲ್ಪಿಸುವ ಬದಲಾಗಿ ಸರ್ಕಾರದ ಆದೇಶ ಸಂಖ್ಯೆ: ಸಕಇ – ಎಂಡಿಎಸ್/78/ 2023, ದಿನಾಂಕ:30.08.2023 ರನ್ವಯ 2024-25ನೇ ಸಾಲಿನಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳಲ್ಲಿ 6ನೇ

--2

Scanned by CamScanner

ತರಗತಿ ಪ್ರವೇಶಾತಿಯಲ್ಲಿ ಆಯಾ ತಾಲ್ಲೂಕಿನ ಸ್ಥಳೀಯ ಅಭ್ಯರ್ಥಿಗಳಿಗೆ ಶೇ.60 ರಷ್ಟು ಸೀಟುಗಳನ್ನು ಹೆಚ್ಚಿಸಿ ಮೀಸಲಿಟ್ಟು, ಪ್ರವೇಶಾವಕಾಶ ಕಲ್ಪಿಸಲು ಆದೇಶಿಸಿದೆ. ಇದರಿಂದಾಗಿ ಆಯಾ ತಾಲ್ಲೂಕಿನ ಸ್ಥಳೀಯ ಮತ್ತು ಗ್ರಾಮೀಣ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

ಮುಂದುವರೆದು, ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು, ದಿನಾಂಕ:15.07.2023 ರ ಪತ್ರದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಮೂರು ಹಂತದಲ್ಲಿ ಸೀಟು ಹಂಚಿಕೆ ಮಾಡಲು ಹಾಗೂ ಉಳಿಕೆ ಸೀಟುಗಳಿಗೆ ಜಿಲ್ಲಾಮಟ್ಟದಲ್ಲಿ ಮೀಸಲಾತಿ ಮತ್ತು ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆ ಮಾಡಲು ನೀಡಿರುವ ನಿರ್ದೇಶನದಂತೆ ಜಿಲ್ಲಾ ಹಂತದಲ್ಲಿ ದಾಖಲಾತಿಗೆ ಕ್ರಮವಹಿಸಲಾಗಿರುತ್ತದೆ.

ಸಂಖ್ಯೆ: ಸಕಇ-ಎಂಡಿಎಸ್/251/2023

(ಡಾ||ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು

Scanned by CamScanner